ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಯೋಜನೆ

2417(3424); ಶ್ರೀ ಅಪ್ಪಾಜಿ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ)

ಅ) ರಾಜ್ಯದ ಗ್ರಾಮೀಣ ಭಾಗದಲ್ಲಿ ಜಾರಿಯಲ್ಲಿರುವ ಬಹು ಗ್ರಾಮಗಳ ಕುಡಿಯುವ ನೀರಿನ ಯೋಜನೆಗಳು ಎಷ್ಟು;

ಆ) ವಿಜಯಪುರ ಜಿಲ್ಲೆಯಲ್ಲಿ ಈ ಯೋಜನೆಯು ಕುಂಠಿತವಾಗಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು);

ಈ) ಮುದ್ದೇಬಿಹಾಳ ಕ್ಷೇತ್ರದ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳು ಯಾವುವು (ವಿವರ ನೀಡುವುದು);

ಉ) ಸದರಿ ಯೋಜನೆಗಳನ್ನು ಯಾವಾಗ ಜಾರಿಗೆ ಮಾಡಲಾಗುವುದು?

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾ. ಪಂ. ರಾಜ್ ಸಚಿವರು)

ಅ) ರಾಜ್ಯದ 30 ಜಿಲ್ಲೆಗಳ ಪೈಕಿ 27 ಜಿಲ್ಲೆಗಳಲ್ಲಿ ಒಟ್ಟು 447 ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳು ಮಂಜೂರಾಗಿರುತ್ತವೆ.

ಆ) ವಿಜಯಪುರ ಜಿಲ್ಲೆಯಲ್ಲಿ ಒಟ್ಟು 37 ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳು ಮಂಜೂರಾಗಿರುತ್ತವೆ. ಇವುಗಳಲ್ಲಿ 11 ಯೋಜನೆಗಳು ಪೂರ್ಣಗೊಂಡಿರುತ್ತವೆ ಹಾಗೂ 11 ಯೋಜನೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿದ್ದು, 7 ಯೋಜನೆಗಳಿಗೆ ಟೆಂಡರ್ ಪ್ರಕ್ರಿಯೆಗಳು ಪ್ರಗತಿಯಲ್ಲಿರುತ್ತವೆ ಮತ್ತು 8 ಯೋಜನೆಗಳಿಗೆ ತಾಂತ್ರಿಕ ಮಂಜೂರಾತಿ ಪ್ರಕ್ರಿಯೆಯಲ್ಲಿವೆ. ಜಿಲ್ಲೆಯಲ್ಲಿ ಯಾವುದೇ ಯೋಜನೆಗಳು ಕುಂಠಿತವಾಗಿರುವುದಿಲ್ಲ. 3 ಯೋಜನೆಗಳ

Impounding Reservoir ನಿರ್ಮಾಣದ ಸ್ಥಳ ಪಡೆಯುವಲ್ಲಿ ಅಲ್ಪ ಮಟ್ಟಿಗೆ ವಿಳಂಬವಾಗಿದೆ.

ಇ) ಮುದ್ದೇಬಿಹಾಳ ತಾಲ್ಲೂಕಿನ ಬಿಳ್ಳೂರ ಮತ್ತು ಇತರೆ 16 ಗ್ರಾಮಗಳ ಯೋಜನೆ ಹಾಗೂ ಮುಕಿಹಾಳ ಮತ್ತು ಇತರೆ 7 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ ಹಾಗೂ ಸಿಂದಗಿ ತಾಲ್ಲೂಕಿನ ಅಸ್ಕಿ ಮತ್ತು ಇತರೆ 8 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ಇಂಪೌಂಡಿಂಗ್ ರಿಸರ್ವಾಯರ್ ನಿರ್ಮಾಣದ ಸ್ಥಳ ಪಡೆಯುವಲ್ಲಿ ಮಾತ್ರ ವಿಳಂಬವಾಗಿದೆ. ತದನಂತರ ಜಿಲ್ಲಾಧಿಕಾರಿಗಳಿಂದ ಅಧ್ಯತಾ ಪ್ರಮಾಣಪತ್ರ ಪಡೆದು ಸದರಿ ಜಮೀನುಗಳನ್ನು ಪಡೆಯಲಾಗಿದೆ.

ಈ) ಮುದ್ದೇಬಿಹಾಳ ಕ್ಷೇತ್ರದಲ್ಲಿ ಹೊಸದಾಗಿ ಕೈಗೊಳ್ಳಬೇಕಾದ ಕುಡಿಯುವ ನೀರಿನ ಯಾವುದೇ ಪ್ರಸ್ತಾಪನೆ ಸರ್ಕಾರದ ಮುಂದಿರುವುದಿಲ್ಲ.

ಉ) ಅನ್ವಯಿಸುವುದಿಲ್ಲ.

ಶಾಲಾ ಮಕ್ಕಳಿಗೆ ಪಠ್ಯ ಪುಸ್ತಕ ಹಾಗೂ ಸಮವಸ್ತ್ರ ವಿತರಣೆ

2418(3425); ಶ್ರೀ ಅಶೋಕ ಖೇಣಿ (ಬೀದರ್ ದಕ್ಷಿಣ)

ಅ) ಕಳೆದ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಶಾಲಾ ಮಕ್ಕಳಿಗೆ ಪಠ್ಯ ಪುಸ್ತಕ ಮತ್ತು ಸಮವಸ್ತ್ರಗಳನ್ನು ಸರಿಯಾದ ಸಮಯಕ್ಕೆ ವಿತರಿಸಲು ಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದರೆ ಇದಕ್ಕೆ ಕಾರಣಗಳೇನು;

ಇ) 2015-16ನೇ ಸಾಲಿನಲ್ಲಿ ಪಠ್ಯ ಪುಸ್ತಕ ಮತ್ತು ಸಮವಸ್ತ್ರಗಳನ್ನು ಸರಿಯಾದ ಸಮಯಕ್ಕೆ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ?